# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 03.03.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ಮಾವಳ್ಳಿಪುರದ ದಲಿತ ಸಂಘರ್ಷ ಸಮಿತಿಯವರೊಡನೆ ಸಭೆ ನಡೆಸಿ, ಮಾವಳ್ಳಿಪುರದ ಘನತ್ಯಾಜ್ಯ ವಿಲೇವಾರಿ ಘಟಕದ ಬಳಿ ದಲಿತ ಸಂಘರ್ಷ ಸಮಿತಿಯವರು ಧರಣಿ ನಡೆಸಿ, ಸಲ್ಲಿಸಿದ್ದ ಮನವಿಯ ಬಗ್ಗೆ ಸಭೆಯಲ್ಲಿ ವಿವರವಾಗಿ ಚರ್ಚಿಸಿದರು.

ಸಭೆಯಲ್ಲಿ ಸಮಿತಿಯ ಪರವಾಗಿ ಸದಸ್ಯರು ಘನತ್ಯಾಜ್ಯ ವಿಲೇವಾರಿ ಘಟಕದಿಂದ ಸುತ್ತಮುತ್ತಲಿನ ಗ್ರಾಮದ ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದ್ದು, ಅನೇಕ ಜನರು ಅಸ್ವಸ್ಥರಾಗಿದ್ದಾರೆ. ಈ ಬಗ್ಗೆ ಪಾಲಿಕೆಯಿಂದ ಮುಂಜಾಗ್ರತಾ ಕ್ರಮಗಳನ್ನು ಸಮರ್ಪಕವಾಗಿ ಕೈಗೊಳ್ಳುತ್ತಿಲ್ಲ, ಹಲವಾರು ಬಾರಿ ಈ ಬಗ್ಗೆ ಮನವಿಯನ್ನು ಕೂಡ ಮಾಡಿದ್ದೇವೆ ಎಂದು ತಿಳಿಸಿದರು. ಪಾಲಿಕೆಯ ಆಯುಕ್ತರವರು ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಘನತ್ಯಾಜ್ಯ ವಿಲೇವಾರಿಯನ್ನು ನೋಡಿಕೊಳ್ಳುವ ಅಧಿಕಾರಿಗಳಿಂದ ಈ ಬಗ್ಗೆ ವಿವರವಾಗಿ ಮಾಹಿತಿಯನ್ನು ಪಡೆದರು.

ಸಮಿತಿ ಸದಸ್ಯರು ಆರೋಗ್ಯ ತಪಾಸಣಾ ಶಿಬಿರಗಳನ್ನು ನಡೆಸುವಂತೆ ಕೋರಿದ್ದರ ಮೇರೆಗೆ ಪಾಲಿಕೆಯ ಆಯುಕ್ತರು ಆರೋಗ್ಯ ಅಧಿಕಾರಿಗಳಿಗೆ ನುರಿತ ವೈದ್ಯರುಗಳನ್ನು ಆಹ್ವಾನಿಸಿ, ಈ ಗ್ರಾಮಗಳಲ್ಲಿ ತಪ್ಪದೇ ಆಗಿಂದ್ದಾಗೆ ತಪಾಸಣೆ ಶಿಬಿರಗಳನ್ನು ನಡೆಸಲು ಸೂಚಿಸಿದರು. ಅದೇ ರೀತಿ ನೊಣ ಮತ್ತು ಸೊಳ್ಳೆ ಹಾವಳಿಯನ್ನು ತಪ್ಪಿಸಲು ಈ ಸ್ಥಳಗಳಲ್ಲಿ ಔಷಧಿ ಸಿಂಪಡಿಸಲು ಪ್ರತ್ಯೇಕ ಸಿಬ್ಬಂದಿಯನ್ನು ನಿಯೋಜಿಸಲು ಸೂಚಿಸಿದರು.

ದಲಿತರ ನಾಯಕರ ಮೇಲೆ ಇರುವ ಪೋಲೀಸ್ ಕೇಸುಗಳನ್ನು ಹಿಂತೆಗೆದುಕೊಳ್ಳಲು ಕ್ರಮ ಕೈಗೊಳ್ಳುವುದಾಗಿ ಆಯುಕ್ತರು ಭರವಸೆ ನೀಡಿದರು.

ಈ ಗ್ರಾಮದ ಸುತ್ತಮುತ್ತಲಿನ ಕೆರೆ, ಬಾವಿ ಮತ್ತು ಬೋರ್‌ವೆಲ್‌ಗಳಿಂದ ನೀರಿನ ಮಾದರಿಗಳನ್ನು ತೆಗೆದುಕೊಂಡು, ಪರೀಕ್ಷೆಗೆ ಒಳಪಡಿಸುವಂತೆ ಸಮಿತಿಯವರು ಕೋರಿದ ಮೇರೆಗೆ, ಈಗಾಗಲೇ ಭಾರತೀಯ ವಿಜ್ಞಾನ ಸಂಸ್ಥೆಯ ಮೂಲಕ ಪರೀಕ್ಷೆಗಳನ್ನು ಕೈಗೊಂಡಿರುವ ಬಗ್ಗೆ ವಿವರಿಸಿದರು. ಹಾಗೂ ನುರಿತ ನೆಫ್ರೋ ಯೂರಾಲಜಿಸ್ಟ್ ಮುಖಾಂತರ ಪರೀಕ್ಷೆ ನಡೆಸಿ ಅವಶ್ಯಕತೆ ಕಂಡುಬಂದಲ್ಲಿ ಅನಾರೋಗ್ಯದಿಂದ ಬಳಲುತ್ತಿರುವವರಿಗೆ ಡಯಾಲಿಸಿಸ್ ಚಿಕಿತ್ಸೆಗೆ ಒಳಪಡಿಸಲು ಕ್ರಮ ಜರುಗಿಸಲಾಗುವುದೆಂದು ತಿಳಿಸಿದರು.

ಈ ಸಭೆಯಲ್ಲಿ ತುರ್ತು ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡು ಮಾವಳ್ಳಿಪುರದ ನಾಗರಿಕರಿಗೆ ಯಾವುದೇ ಸಮಸ್ಯೆಯಾಗದಂತೆ ಜಾಗ್ರತೆ ವಹಿಸಲಾಗುವುದು ಎಂಬ ಭರವಸೆಯನ್ನು ಪಾಲಿಕೆಯ ಆಯುಕ್ತರು ನೀಡಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**